1322 (1640) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಾಮರಾಜನಗರ ತಾಲ್ಲೂಕಿನ ಗಡಿ ಅಂಚಿನ ಭಾಗದಲ್ಲಿರುವ ಗಿರಿಜನರ ಹಾಡಿ ಹಾಗೂ ಲಂಬಾಣಿ ತಾಂಡಗಳಿಗೆ ಸೇರಿದ ಜಮೀನುಗಳ ಪಹಣಿಯಲ್ಲಿ ಅರಣ್ಯ ಇಲಾಖೆ ಎಂದು ನಮೂದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ಭಾಗದ ಎಲ್ಲಾ ಗ್ರಾಮಗಳು ದಾಖಲೆ ಗ್ರಾಮಗಳಾಗಿರುವುದರಿಂದ ಅದನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸುವ ಯೋಜನೆ ಸರ್ಕಾರಕ್ಕಿದೆಯೇ;

ಇ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) :

ಅ) ಚಾಮರಾಜನಗರದಲ್ಲಿ ಗಿರಿಜನ ಹಾಡಿ ಹಾಗೂ ಲಂಬಾಣಿ ತಾಂಡಗಳಿಗೆ ಸೇರಿದ ಜಮೀನುಗಳ ಪಹಣಿಯಲ್ಲಿ ಅರಣ್ಯ ಇಲಾಖೆ ಎಂದು ನಮೂದಾಗಿರುವುದಿಲ್ಲ.

ಆ) ಇದೆ. ಆದರೆ, ಈಗ ಕೇಂದ್ರ ಸರ್ಕಾರದ ಚುನಾವಣಾ ಆಯೋಗವು ಲೋಕಸಭೆ ಹಾಗೂ ರಾಜ್ಯ ವಿಧಾನಸಭಾ ಕ್ಷೇತ್ರಗಳ ಪುನರ್ ವಿಂಗಡಣಾ ಕಾರ್ಯವು ಪೂರ್ಣಗೊಳ್ಳುವವರೆಗೆ ಆಡಳಿತಾತ್ಮಕ ಘಟಕಗಳಾದ ಜಿಲ್ಲೆ, ತಾಲ್ಲೂಕು, ಹೋಬಳಿ, ಗ್ರಾಮ ಇತ್ಯಾದಿಗಳ ಸ್ಥಾನ/ಜಿಲ್ಲೆಗಳಲ್ಲಿ ಯಾವುದೇ ಬದಲಾವಣೆ ಮಾಡಬಾರದೆಂದು ನಿರ್ಬಂಧ ವಿಧಿಸಿದೆ.

ಈ ನಿರ್ಬಂಧವನ್ನು ಕೇಂದ್ರ ಸರ್ಕಾರವು ಹಿಂದಕ್ಕೆ ಪಡೆದ ನಂತರ ನಿಯಮಾನುಸಾರ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಇ) (ಆ) ನಲ್ಲಿನ ಉತ್ತರದಿಂದ ಉದ್ಭವಿಸುವುದಿಲ್ಲ.

1323 (1641) ಶ್ರೀ ಧ್ರುವನಾರಾಯಣ ಆರ್. (ಸಂತೇಮರಳ್ಳಿ) :– ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿನ ಬೀಳು ಬಿದ್ದಿರುವ ಸರ್ಕಾರಿ ಜಮೀನುಗಳನ್ನು ರೆಸ್ಟೋರ್ ಮಾಡಲು ಸರ್ಕಾರ ಆಗಿಂದ್ದಾಗೆ (ಕಾಲ–ಕಾಲಕ್ಕೆ) ಆದೇಶವನ್ನು ಹೊರಡಿಸಲಾಗಿದ್ದರೂ ಸಹ